

# ಶಿಕ್ಷಣ ಕ್ಷೇತ್ರಕ್ಕೆ ನಾಲ್ವಡಿ ಕೊಡುಗೆ ಅಪಾರ



**ಮೈಸೂರು:** ದಕ್ಷಿಣ ಭಾರತದಲ್ಲಿ ಪ್ರಥಮ ಬಾರಿಗೆ ಮೈಸೂರು ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಮೂಲಕ ಉನ್ನತ ಶಿಕ್ಷಣಕ್ಕೆ ಮುನ್ನುಡಿ ಬರೆದ ಏಕೈಕ ವ್ಯಕ್ತಿ ರಾಜರ್ಷಿ "ನಾಲ್ವಡಿ ಕೃಷ್ಣರಾಜ ಒಡೆಯರ್" ಎಂದು ಯುವ ಲೇಖಕ ಲಕ್ಷ್ಮೀ ಕಿಶೋರ್ ಅರಸ್ ಬಣ್ಣಿಸಿದರು.

ಮೈಸೂರು ವಿಶ್ವವಿದ್ಯಾಲಯದ ಯೋಗ ವಿಜ್ಞಾನಗಳ ಅಧ್ಯಯನ ಸಂಸ್ಥೆಯಲ್ಲಿ ಜರುಗಿದ ನಾಲ್ವಡಿ ಕೃಷ್ಣರಾಜ ಒಡೆಯರ 139ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು ನಾಲ್ವಡಿ ಅವರು ತಮ್ಮ ಚಿಂತನೆಗಳ ಮೂಲಕ ನಾಡನ್ನು ಎಲ್ಲಾ ಆಯಾಮಗಳಲ್ಲಿ ಅಭಿವೃದ್ಧಿ ಮಾಡಿದರು. ಅದರಲ್ಲಿಯೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಯ ಸಲುವಾಗಿ ಮಹಿಳೆಯರ ಶಿಕ್ಷಣಕ್ಕೆ ಆದ್ಯತೆ ನೀಡಿ 1916ರಲ್ಲಿ ಮೈಸೂರು ವಿಶ್ವವಿದ್ಯಾಲಯವನ್ನು ಸ್ಥಾಪನೆ ಮಾಡುವುದರ ಮೂಲಕ ಮೈಸೂರು ಸಂಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶದ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗವನ್ನು ಮಾಡಲು ಅಣುವು ಮಾಡಿಕೊಟ್ಟರು. ರಾಜ್ಯದ್ಯಂತ ತಾಂತ್ರಿಕ ಮಹಾವಿದ್ಯಾಲಯಗಳು. ಕನ್ನಡ ಶಿಕ್ಷಣ ಸಂಸ್ಥೆಗಳು .ಕೈಗಾರಿಕಾ ತರಬೇತಿ ಸಂಸ್ಥೆಗಳು. ಕೃಷಿ ವಿಶ್ವವಿದ್ಯಾಲಯ ಹೀಗೆ ಹಲವಾರು ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸುವುದರ ಮೂಲಕ ಉಚಿತ ಶಿಕ್ಷಣವನ್ನು ನೀಡಿ ಅಂದಿನ ಕಾಲದಲ್ಲಿ ಶಿಕ್ಷಣ ಕ್ರಾಂತಿಯನ್ನು ಮಾಡಿದರು. ಅಷ್ಟೇ ಅಲ್ಲದೆ ಹಿಂದುಳಿದ ವರ್ಗಗಳಿಗೂ ಸಹ ಶೇ 75% ಮೀಸಲಾತಿಯನ್ನು ನೀಡುವುದರ ಮೂಲಕ ಎಲ್ಲಾ ವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆ ಕಾರಣೀಭೂತರಾದರು ಎಂದು ತಿಳಿಸಿದರು.

ಇದೇ ವೇಳೆ ಯೋಗ ವಿಜ್ಞಾನ ಅಧ್ಯಯನ ವಿಭಾಗದ ಅಧ್ಯಾಪಕ ರವಣಿಕರ್ ಮಾತನಾಡಿ ಈ ನಾಡಿಗೆ ನಾಲ್ವಡಿ ಯವರು ಕೊಡುಗೆ ಅಪಾರ. ನೀರಾವರಿ .ಕೃಷಿ. ಶಿಕ್ಷಣ. ಕೈಗಾರಿಕೆ. ಮಾಹಿತಿ ತಂತ್ರಜ್ಞಾನ. ವಿಜ್ಞಾನ ಸಂಶೋಧನೆ. ರೈಲ್ವೆ ಮಾರ್ಗಗಳ ಅಭಿವೃದ್ಧಿ ಹೀಗೆ ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡಿ ರಾಜ ಪ್ರಭುತ್ವದ ಕಾಲದಲ್ಲಿ ಆದರ್ಶ ರಾಜ್ಯವನ್ನು ನಿರ್ಮಾಣ ಮಾಡಿ ಮೈಸೂರು ರಾಜ್ಯದ ಜನತೆಗೆ ಸುವರ್ಣ ಯುಗದ ಆಡಳಿತವನ್ನು ಕೊಟ್ಟು ಅಜರಾಮರವಾಗಿ ಉಳಿದವರು ನಾಲ್ವಡಿ ಕೃಷ್ಣರಾಜ ಒಡೆಯರ್ ಎಂದು ಅಭಿಪ್ರಾಯ ಪಟ್ಟರು.

ಇದೇ ವೇಳೆ ಯೋಗ ವಿಜ್ಞಾನಗಳ ಅಧ್ಯಯನ ವಿಭಾಗದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ ಜಯಂತೋತ್ಸವವನ್ನು ಹಾಗೂ ಪರಿಸರ ದಿನಾಚರಣೆಯನ್ನು ಆಚರಿಸಿ ಸಿಹಿ ಹಂಚಲಾಯಿತು .ಈ ಸಂದರ್ಭದಲ್ಲಿ ಯೋಗ ವಿಭಾಗದ ಅಧ್ಯಾಪಕರಾದ ದರ್ಶನ್ ಗೌಡ ಎಂ.ಎಸ್ ,ಅಧ್ಯಾಪಕ ವೃಂದದವರು, ಸಿಬ್ಬಂದಿ ವರ್ಗದವರು ಮತ್ತು ಯೋಗ ಶಿಬಿರಾರ್ಥಿಗಳು ಹಾಜರಿದ್ದರು.